**All India Radio: Bangalore**
**National Bulletin In Kannada**
**20.12.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**20.12.2025 1.10 p.m.**

**<><><><>**

ಮುಖ್ಯಾಂಶಗಳು

1. ಪಶ್ಚಿಮ ಬಂಗಾಳದ ರಾಣಾಘಾಟ್‌ನಲ್ಲಿಂದು ಎರಡು ರಾಷ್ಟ್ರೀಯ ಹೆದ್ದಾರಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಶಿಲಾನ್ಯಾಸ
2. ಕರ್ನಾಟಕದ ಹಂಪಿಯಲ್ಲಿ ರಾಷ್ಟ್ರೀಯ ಉಪಕ್ರಮವಾದ ವಿಜಯಪಥಕ್ಕೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಚಾಲನೆ
3. ದೇಶದಾದ್ಯಂತ ನಾಳೆ ಪೋಲಿಯೋ ಲಸಿಕೆ ಅಭಿಯಾನ - ೫ ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಕಡ್ಡಾಯ
4. ಅಸ್ಸಾಂನಲ್ಲಿ ರಾಜಧಾನಿ ಎಕ್ಸ್‌ಪ್ರೆಸ್ ರೈಲು ಡಿಕ್ಕಿ ; ೭ ಆನೆಗಳ ಸಾವು; ಹಳಿ ತಪ್ಪಿದ ರೈಲು ಬೋಗಿಗಳು
5. ೧೯ ವರ್ಷದೊಳಗಿನ ಏಷ್ಯಾ ಕಪ್ ಕ್ರಿಕೆಟ್ ಹಣಾಹಣಿ; ನಾಳೆ ಭಾರತ - ಪಾಕ್ ಮುಖಾಮುಖಿ

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಪಶ್ಚಿಮ ಬಂಗಾಳಕ್ಕೆ ಭೇಟಿ ನೀಡಲಿದ್ದಾರೆ. ನಾಡಿಯಾ ಜಿಲ್ಲೆಯ ರಾಣಾಘಾಟ್‌ನಲ್ಲಿ ೩ ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ಎರಡು ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಬಳಿಕ ಗುವಾಹಟಿಯಲ್ಲಿ ಭಾರತದ ಮೊದಲ ಪ್ರಕೃತಿ ಆಧಾರಿತ ವಿಮಾನ ನಿಲ್ದಾಣ ಟರ್ಮಿನಲ್‌ಅನ್ನು ಉದ್ಘಾಟಿಸಲಿದ್ದಾರೆ. ಇದು ಅಸ್ಸಾಂನ ವಾಯುಯಾನ ಮತ್ತು ಮೂಲಸೌಕರ್ಯ ಬೆಳವಣಿಗೆಯಲ್ಲಿ ಪ್ರಮುಖ ಮೈಲಿಗಲ್ಲಾಗಿದೆ. ಈ ಅತ್ಯಾಧುನಿಕ ಸೌಲಭ್ಯವು ಭಾರತದ ಮೊದಲ ಪ್ರಕೃತಿ ಆಧಾರಿತ ವಿಮಾನ ನಿಲ್ದಾಣ ಟರ್ಮಿನಲ್ ಆಗಿದ್ದು, ಅಸ್ಸಾಂನ ಶ್ರೀಮಂತ ನೈಸರ್ಗಿಕ ಭೂದೃಶ್ಯ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸುವಂತೆ ವಿನ್ಯಾಸಗೊಳಿಸಲಾಗಿದೆ. ವಾರ್ಷಿಕವಾಗಿ ೧.೩ ಕೋಟಿಗೂ ಹೆಚ್ಚು

ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯದೊಂದಿಗೆ ಟರ್ಮಿನಲ್ ಅನ್ನು ಅಭಿವೃದ್ಧಿಪಡಿಸಲಾಗಿದೆ. ಗುವಾಹಟಿಯನ್ನು ಇಡೀ ಪ್ರದೇಶಕ್ಕೆ ಪ್ರಮುಖ ವಾಯುಯಾನ ಕೇಂದ್ರವಾಗಿ ಇರಿಸಲಾಗಿದೆ.

<><><>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ವಿಜಯನಗರ ಜಿಲ್ಲೆಯ ಹಂಪಿಯಲ್ಲಿ ರಾಷ್ಟ್ರೀಯ ಉಪಕ್ರಮವಾದ ಸ್ಟೈಂಟ್ ಎಐ ಲ್ಯಾಬ್ಸ್ ವಿಜಯಪಥಕ್ಕೆ ಇಂದು ಚಾಲನೆ ನೀಡಿದರು. ಸರ್ಕಾರಿ ಶಾಲೆಗಳಲ್ಲಿ ಕೃತಕ ಬುದ್ಧಿಮತ್ತೆ ಮತ್ತು ರೋಬೋಟಿಕ್ಸ್ ಶಿಕ್ಷಣವನ್ನು ಎಲ್ಲರಿಗೂ ಸುಲಭವಾಗಿ ಸಿಗುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ರೂಪಿಸಲಾಗಿದೆ. ಶಾಲೆಗಳಲ್ಲಿ ಪ್ರಯೋಗಾಲಯ ಸ್ಥಾಪಿಸಲಾಗುತ್ತಿದ್ದು, ಪ್ರತಿಯೊಂದು ಪ್ರಯೋಗಾಲಯವು ಉನ್ನತ ಸಾಮರ್ಥ್ಯದ ಕಂಪ್ಯೂಟರ್‌ಗಳು, ಸೆನ್ಸಾರ್‌ಗಳು ಮತ್ತು ಸುರಕ್ಷಿತ ಬ್ರಾಡ್‌ಬ್ಯಾಂಡ್ ಸಂಪರ್ಕ ಹೊಂದಿರಲಿವೆ. ಎರಡು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರಯೋಜನ ನೀಡುತ್ತಿರುವ ಹಾಗೂ ೨೦೦ಕ್ಕೂ ಹೆಚ್ಚು ಶಿಕ್ಷಕರಿಗೆ ತರಬೇತಿ ನೀಡುತ್ತಿರುವ ವಿಜಯಪಥವು ನಾವಿನ್ಯತೆ, ವೃತ್ತಿ ಸಿದ್ಧತೆ ಮತ್ತು ತಳಮಟ್ಟದ ಡಿಜಿಟಲ್ ಸಬಲೀಕರಣಗೊಳಿಸಲಿದೆ.

<><><>

ನವದೆಹಲಿಯಲ್ಲಿ ನೂತನವಾಗಿ ಉದ್ಘಾಟನೆಗೊಂಡ ವಿಶ್ವ ಆರೋಗ್ಯ ಸಂಸ್ಥೆಯ ಆಗ್ನೇಯ ಏಷ್ಯಾ ಪ್ರಾದೇಶಿಕ ಕಚೇರಿಗೆ ಇಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಅವರು ಭೇಟಿ ನೀಡಿದರು. ಈ ವೇಳೆ ಅವರು, ಆಗ್ನೇಯ ಏಷ್ಯಾ ರಾಷ್ಟ್ರಗಳ ಸಚಿವರು ಮತ್ತು ಹಿರಿಯ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿದರು. ಬಳಿಕ ಮಾತನಾಡಿದ ಅವರು, ಈ ಕಟ್ಟಡವು ಕೇವಲ ಭೌತಿಕ ರಚನೆಯಲ್ಲ, ಪ್ರಾದೇಶಿಕ ಮತ್ತು ಜಾಗತಿಕ ಆರೋಗ್ಯ ಸಹಕಾರವನ್ನು ಬಲಪಡಿಸುವ ಭಾರತದ ಅಚಲ ಬದ್ಧತೆಯನ್ನು ಪ್ರದರ್ಶಿಸಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಸಾರ್ವಜನಿಕ ಆರೋಗ್ಯ ಸವಾಲುಗಳಿಗೆ ರಾಷ್ಟ್ರಗಳ ನಡುವೆ ಸಹಯೋಗ, ಸಮನ್ವಯದ ಅಗತ್ಯತೆಯನ್ನು ಪ್ರತಿಪಾದಿಸಿದ್ದಾರೆ.

<><><>

ಭಾರತವು ಪೋಲಿಯೋ ಮುಕ್ತ ರಾಷ್ಟ್ರವಾಗಿ ೧೪ ವರ್ಷ ಕಳೆದಿದೆ. ಇದು ಒಂದು ಮಹತ್ತರ ಸಾಧನೆಯಾಗಿದ್ದರೂ, ಇತ್ತೀಚಿನ ದಿನಗಳಲ್ಲಿ ಭಾರತದ ನೆರೆಯ ರಾಷ್ಟ್ರಗಳಲ್ಲಿ ವೈಲ್ಡ್ ಪೋಲಿಯೋ ವೈರಸ್ ಸಂಭಾವ್ಯ ಹರಡುವಿಕೆಯು ಇಂದಿಗೂ ಜಗತ್ತಿನಾದ್ಯಂತ ಹಾಗೂ ಭಾರತದ ಮಕ್ಕಳನ್ನು

ಅಪಾಯದಂಚಿನಲ್ಲಿರಿಸಿದೆ. ಮುಂಜಾಗ್ರತಾ ದೃಷ್ಟಿಯಿಂದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ದೇಶದಲ್ಲಿ ಮುಂದುವರಿಸಲಾಗಿದೆ. ತಜ್ಞರ ಸಲಹೆ ಹಿನ್ನೆಲೆಯಲ್ಲಿ ೫ ವರ್ಷದೊಳಗಿನ ಎಲ್ಲಾ ಮಕ್ಕಳನ್ನು ವ್ಯಾಪ್ತಿಗೊಳಪಡಿಸಿ, ರಾಷ್ಟ್ರಿಯ ಲಸಿಕಾ ದಿನವನ್ನು ನಾಳೆ ದೇಶಾದ್ಯಂತ ಹಮ್ಮಿಕೊಳ್ಳಲಾಗಿದೆ. ಪ್ರತಿ ವರ್ಷದಂತೆ ಈ ವರ್ಷವೂ ಒಂದು ಸುತ್ತಿನ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಪ್ರತಿ ಮಗುವಿಗೆ ಎರಡು ಹನಿ ಪೋಲಿಯೋ ಲಸಿಕೆಯನ್ನು ನೀಡಲಾಗುತ್ತಿದೆ. ದೇಶಾದ್ಯಂತ ಅಂದಾಜು ೬೨ ಲಕ್ಷ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ.

<><><>

ಅಸ್ಸಾಂನಲ್ಲಿಂದು ರಾಜಧಾನಿ ಎಕ್ಸ್‌ಪ್ರೆಸ್ ರೈಲು ಡಿಕ್ಕಿ ಹೊಡೆದು, ಏಳು ಆನೆಗಳು ಸಾವನ್ನಪ್ಪಿವೆ. ಘಟನೆಯಲ್ಲಿ ರೈಲಿನ ಹಲವಾರು ಬೋಗಿಗಳು ಹಳಿತಪ್ಪಿವೆ. ಇದರಿಂದಾಗಿ ರೈಲು ಸೇವೆಗಳು ಅಸ್ತವ್ಯಸ್ತಗೊಂಡಿವೆ. ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಯಾಣಿಕರು ಹಾಗು ಸಿಬ್ಬಂದಿಗೆ ಗಾಯಗಳಾಗಿಲ್ಲ ಎಂದು ರೈಲ್ವೆ ಇಲಾಖೆ ಸ್ಪಷ್ಟಪಡಿಸಿದೆ. ಬೆಳಗಿನಜಾವ ೨.೧೭ರ ಸುಮಾರಿಗೆ ನವದೆಹಲಿಗೆ ತೆರಳುತ್ತಿದ್ದ ರಾಜಧಾನಿ ಎಕ್ಸ್‌ಪ್ರೆಸ್ ಸಾಗುತ್ತಿದ್ದಾಗ ರೈಲು ಹಳಿಗಳನ್ನು ದಾಟುತ್ತಿದ್ದ ಆನೆಗಳಿಗೆ ಡಿಕ್ಕಿ ಹೊಡೆದು, ಅಪಘಾತ ಸಂಭವಿಸಿದೆ.

<><><>

ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಇತರರ ವಿರುದ್ಧ ಹಣ ವರ್ಗಾವಣೆ ದೂರನ್ನು ಪರಿಗಣಿಸಲು ನಿರಾಕರಿಸಿದ ವಿಚಾರಣಾ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಜಾರಿ ನಿರ್ದೇಶನಾಲಯ ದೆಹಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ. ಅರ್ಜಿಯಲ್ಲಿ ಕೆಳ ನ್ಯಾಯಾಲಯದ ನಿರ್ಧಾರವನ್ನು ಮರು ಪರಿಶೀಲಿಸುವಂತೆ ಕೋರಿದೆ. ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಇತರ ಐವರ ವಿರುದ್ಧದ ಹಣ ವರ್ಗಾವಣೆ ಪ್ರಕರಣವನ್ನು ಪರಿಗಣಿಸಲು ದೆಹಲಿ ನ್ಯಾಯಾಲಯ ಮಂಗಳವಾರ ನಿರಾಕರಿಸಿತ್ತು.

<><><>

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇಂದಿನಿಂದ ಎರಡು ದಿನಗಳ ಕಾಲ ತೆಲಂಗಾಣ ಮತ್ತು ಮಧ್ಯಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ತಮ್ಮ ಭೇಟಿಯ ಮೊದಲ ದಿನವಾದ ಇಂದು, ಅವರು,

ಹೈದರಾಬಾದ್‌ನ ರಾಮೋಜಿ ಫಿಲ್ಮ್ ಸಿಟಿಯಲ್ಲಿ ನಡೆಯಲಿರುವ ಸಾರ್ವಜನಿಕ ಸೇವಾ ಆಯೋಗಗಳ ಅಧ್ಯಕ್ಷರ ರಾಷ್ಟ್ರೀಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ನಾಳೆ, ವಿಶ್ವ ಧ್ಯಾನ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಬಳಿಕ ಅವರು, ಅಟಲ್ ಫೌಂಡೇಶನ್ ಆಯೋಜಿಸುತ್ತಿರುವ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ಶತಮಾನೋತ್ಸವದಲ್ಲಿ ಭಾಗವಹಿಸಲು ಮಧ್ಯಪ್ರದೇಶದ ಇಂದೋರ್‌ಗೆ ಭೇಟಿ ನೀಡಲಿದ್ದಾರೆ.

<><><>

ಫೆಬ್ರವರಿಯಲ್ಲಿ ಮಂಡಿಸಲಾಗುವ ೨೦೨೬-೨೭ನೇ ಸಾಲಿನ ಆಯವ್ಯಯ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ನಾಗರಿಕರಿಂದ ಸಲಹೆಗಳನ್ನು ಆಹ್ವಾನಿಸಿದೆ. ನಾಗರಿಕರು ತಮ್ಮ ಶಿಫಾರಸ್ಸುಗಳನ್ನು ತಿತಿತಿ.ಟಥಿಂತಿ.ಟಿ ಲ್ಲಿರುವ ಮೈಗೌವ್ ಪೋರ್ಟಲ್‌ಗೆ ಕಳುಹಿಸಬಹುದು. ಇದು ಜನರ ಆಕಾಂಕ್ಷೆಗಳು ಮತ್ತು ಅಗತ್ಯಗಳನ್ನು ಪ್ರತಿಬಿಂಬಿಸುವ ಗುರಿ ಹೊಂದಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ.

<><><>

ಬಿಹಾರ, ಹರಿಯಾಣ, ಚಂಡೀಗಢ, ದೆಹಲಿ, ಮಧ್ಯಪ್ರದೇಶ, ಉತ್ತರ ಪ್ರದೇಶ ಮತ್ತು ಉತ್ತರಾಖಂಡಗಳಲ್ಲಿ ದಟ್ಟವಾದ ಮಂಜಿನ ವಾತಾವರಣವಿರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರ್ನಾಟಕ ಮತ್ತು ತೆಲಂಗಾಣದ ಒಳಭಾಗದಲ್ಲೂ ಶೀತಲ ಅಲೆಯ ವಾತಾವರಣವಿರಲಿದೆ ಎಂದು ಮುನ್ನೆಚ್ಚರಿಕೆ ನೀಡಿದೆ. ಈ ನಡುವೆ ಮಂಜು ಮತ್ತು ವಿಮಾನ ಕಾರ್ಯಾಚರಣೆಯ ಮೇಲೆ ಪರಿಣಾಮ ಬೀರುವ ಕಡಿಮೆ ಗೋಚರತೆಯ ಪರಿಸ್ಥಿತಿಗಳನ್ನು ಗಮನದಲ್ಲಿಟ್ಟುಕೊಂಡು ನಾಗರಿಕ ವಿಮಾನಯಾನ ಸಚಿವಾಲಯವು ಎಲ್ಲಾ ವಿಮಾನಯಾನ ಸಂಸ್ಥೆಗಳು ಪ್ರಯಾಣಿಕರ ಸೌಲಭ್ಯ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ನಿರ್ದೇಶಿಸಿದೆ. ಸಕಾಲಿಕ ಮತ್ತು ನಿಖರವಾದ ವಿಮಾನ ಮಾಹಿತಿಯನ್ನು ಖಚಿತಪಡಿಸಿಕೊಳ್ಳುವುದು, ದೀರ್ಘ ವಿಳಂಬದ ಸಮಯದಲ್ಲಿ ಊಟ ಮತ್ತು ಉಪಾಹಾರಗಳನ್ನು ಒದಗಿಸುವುದು, ಟಿಕೆಟ್ ರದ್ದು ಸಂದರ್ಭದಲ್ಲಿ ಮರು ಬುಕಿಂಗ್ ಅಥವಾ ಮರುಪಾವತಿಯನ್ನು ಸುಗಮಗೊಳಿಸುವಂತೆ ಸೂಚಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ಪ್ರಯಾಣಿಕರ ಸುರಕ್ಷತೆ ಮತ್ತು ಅನುಕೂಲತೆಯು ತನ್ನ ಪ್ರಮುಖ ಆದ್ಯತೆಯಾಗಿದೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

<><><>

ಸಿರಿಯಾದಲ್ಲಿ ಅಮೆರಿಕಾದ ಪಡೆಗಳ ಮೇಲೆ ನಡೆದ ದಾಳಿಗೆ ಪ್ರತಿಯಾಗಿ ಐಸಿಸ್ ಉಗ್ರರ ವಿರುದ್ಧ ಅಮೆರಿಕ ದಾಳಿ ನಡೆಸಿದೆ. ಯುದ್ಧ ವಿಮಾನಗಳು, ಹೆಲಿಕಾಪ್ಟರ್‌ಗಳ ಮೂಲಕ ದಾಳಿ ನಡೆಸಿರುವ ಅಮೆರಿಕ, ಪ್ರಮುಖ ಶಸ್ತ್ರಾಸ್ತ್ರ ತಾಣಗಳನ್ನು ನಿರ್ಮೂಲನೆ ಮಾಡಿದೆ. ಈ ಹಿಂದೆ ಇಸ್ಲಾಮಿಕ್ ಸ್ಟೇಟ್ ನಡೆಸಿದ ದಾಳಿಯಲ್ಲಿ ಇಬ್ಬರು ಅಮೆರಿಕಾದ ಸೈನಿಕರು ಮತ್ತು ಇಬ್ಬರು ನಾಗರಿಕರು ಸಾವನ್ನಪ್ಪಿದ್ದರು. ಈ ಕುರಿತಂತೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅಮೆರಿಕನ್ನರ ಮೇಲೆ ಭವಿಷ್ಯದಲ್ಲಿ ಯಾವುದೇ ದಾಳಿ ನಡೆಸದಂತೆ ಎಚ್ಚರಿಕೆ ನೀಡಿದ್ದಾರೆ. ಐಸಿಸ್ ಉಗ್ರರನ್ನು ಸಂಪೂರ್ಣ ನಿರ್ಮೂಲನೆ ಮಾಡಿದರೆ, ಆ ದೇಶದ ಭವಿಷ್ಯ ಸುಧಾರಿಸಬಹುದು ಎಂದು ತಿಳಿಸಿದ್ದಾರೆ.

<><><>

ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಹಾಗೂ ಅವರ ಪತ್ನಿ ಬುಷ್ರಾ ಬೀಬಿಗೆ ಭ್ರಷ್ಟಾಚಾರ ಪ್ರಕರಣ ಒಂದರಲ್ಲಿ ಪಾಕ್ ನ್ಯಾಯಾಲಯ ಜೈಲು ಶಿಕ್ಷೆ ವಿಧಿಸಿದೆ. ರಾವಲ್ಪಿಂಡಿಯಲ್ಲಿ ಬಿಗಿ ಭದ್ರತೆಯ ನಡುವೆ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಶಾರುಖ್ ಅರ್ಜುರ್‌ಮಂದ್ ತೀರ್ಪು ಪ್ರಕಟಿಸಿದ್ದಾರೆ. ೨೦೨೧ರಲ್ಲಿ ಸೌದಿ ಅರೆಬಿಯಾ ಸರ್ಕಾರದಿಂದ ಉಡುಗೊರೆ ಪಡೆದು, ವಂಚಿಸಿದ ಆರೋಪ ಇಮ್ರಾನ್ ಖಾನ್ ಮೇಲಿದೆ. ದುಬಾರಿ ಕೈ ಗಡಿಯಾರಗಳು, ವಜ್ರ ಮತ್ತು ಚಿನ್ನದ ಆಭರಣ ಸೇರಿದಂತೆ ಬೆಲೆ ಬಾಳುವ ವಸ್ತುಗಳನ್ನು ಪಾಕಿಸ್ತಾನದ ಉಡುಗೊರೆ ಭಂಡಾರವಾದ ತೋಷಖಾನಾದಲ್ಲಿ ಠೇವಣಿ ಇಡದೆ ಮಾರಾಟ ಮಾಡಿದ್ದಾರೆ ಎಂಬ ಆರೋಪದ ಮೇಲೆ ಪ್ರಕರಣ ದಾಖಲಾಗಿತ್ತು.

<><><>

೧೯ ವರ್ಷದೊಳಗಿನವರ ಏಷ್ಯಾ ಕಪ್ ಕ್ರಿಕೆಟ್ ಟೂರ್ನಿಯ ಫೈನಲ್ ಪಂದ್ಯದಲ್ಲಿ ನಾಳೆ ಭಾರತ ಹಾಗೂ ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಲಿವೆ. ನಿನ್ನೆ ನಡೆದ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಶ್ರೀಲಂಕಾ ತಂಡವನ್ನು ೮ ವಿಕೆಟ್‌ಗಳಿಂದ ಮಣಿಸಿರುವ ಭಾರತ ಫೈನಲ್ ಪ್ರವೇಶಿಸಿದೆ. ೧೧ ವರ್ಷಗಳ ನಂತರ ಫೈನಲ್‌ನಲ್ಲಿ ಭಾರತ ಮತ್ತು ಪಾಕ್ ತಂಡಗಳು ಮುಖಾಮುಖಿಯಾಗಲಿವೆ. ಭಾರತ ಇದುವರೆಗೆ ೮ ಬಾರಿ ಪ್ರಶಸ್ತಿ ಗೆದ್ದಿದೆ.

<><><>

ಚೀನಾದ ಹ್ಯಾಂಗ್‌ಝೌನಲ್ಲಿ ನಡೆಯಲಿರುವ ಬಿಡಬ್ಲ್ಯೂಎಫ್ ವರ್ಲ್ಡ್ ಟೂರ್ ಬ್ಯಾಡ್ಮಿಂಟನ್ ಸೆಮಿಫೈನಲ್‌ನಲ್ಲಿಂದು ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ, ಚೀನಾದ ಲಿಯಾಂಗ್ ವೀ ಕೆಂಗ್ ಮತ್ತು ವಾಂಗ್‌ಚಾಂಗ್ ಅವರನ್ನು ಎದುರಿಸಲಿದ್ದಾರೆ. ಮೂರನೇ ಶ್ರೇಯಾಂಕಿತ ಸಾತ್ವಿಕ್ ಮತ್ತು ಚಿರಾಗ್ ಜೋಡಿ ನಿನ್ನೆ ನಡೆದ ಬಿ ಗುಂಪಿನ ಪಂದ್ಯದಲ್ಲಿ ಅಗ್ರಸ್ಥಾನ ಪಡೆದು, ಸೆಮಿಫೈನಲ್ ತಲುಪಿದ ಮೊದಲ ಭಾರತೀಯ ಪುರುಷರ ಡಬಲ್ಸ್ ಜೋಡಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>